# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 301

ಸದಸ್ಯರ ಹೆಸರು : ಶ್ರೀ ಡಿ.ಎಸ್.ಅರುಣ್

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 06.12.2023

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ.</td><td>ಸಾರಿಗೆ ನಿಗಮದಲ್ಲಿ ಚಾಲಕರು ಮತ್ತು ನಿರ್ವಾಹಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಕಳೆದ 07 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗದೇ ಇರುವ ಕಾರಣ ಚಾಲಕರು ಮತ್ತು ನಿರ್ವಾಹಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.</td></tr>
<tr><td>ಆ.</td><td>ಸಿಬ್ಬಂದಿಯ ಕೊರತೆ ನೀಗಿಸಲು ಚಾಲಕ ಮತ್ತು ನಿರ್ವಾಹಕರಿಗೆ ಹೆಚ್ಚುವರಿ ಕೆಲಸ (ಒ.ಟಿ) ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಸಾರಿಗೆ ಸಂಸ್ಥೆಗಳಲ್ಲಿ ಹಬ್ಬದ ರಜೆ/ವಿಶೇಷ ಹೆಚ್ಚುವರಿ ಮತ್ತು ಜಾತ್ರೆ ಕಾರ್ಯಾಚರಣೆಯ ವೇಳೆ ಸಾರ್ವಜನಿಕ ಪ್ರಯಾಣಿಕರ ಒತ್ತಡಕ್ಕೆ ಅನುಗುಣವಾಗಿ ಸಾರಿಗೆ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಚಾಲಕ ಮತ್ತು ನಿರ್ವಾಹಕರಿಗೆ ಹೆಚ್ಚುವರಿ ಕೆಲಸಕ್ಕೆ ನಿಯಮಾನುಸಾರ ನಿಯೋಜಿಸಲಾಗುತ್ತಿದೆ.<br><br>ನಾಲ್ಕು ನಿಗಮ/ಸಂಸ್ಥೆಯಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಚಾಲಕ/ ನಿರ್ವಾಹಕ/ ಚಾಲಕ-ಕಂ-ನಿರ್ವಾಹಕರ ಕಾರ್ಯ ನಿರ್ವಹಣೆ ಹಾಗೂ ಖಾಲಿ ಹುದ್ದೆಗಳ ವಿವರ ಕೆಳಕಂಡಂತಿದೆ:<br><br>
<table>
<tr><th>ಸಂಸ್ಥೆಗಳು</th><th>ಕಾರ್ಯನಿರ್ವಹಣೆ</th><th>ಖಾಲಿ ಹುದ್ದೆ</th></tr>
<tr><td>ಕ.ರಾ.ರ.ಸಾ.ನಿ.</td><td>24676</td><td>3180</td></tr>
<tr><td>ಬೆಂ.ಮ.ಸಾ.ಸಂ.</td><td>23163</td><td>1857</td></tr>
<tr><td>ವಾ.ಕ.ರ.ಸಾ.ಸಂ.</td><td>14981</td><td>416</td></tr>
<tr><td>ಕ.ಕ.ರ.ಸಾ.ನಿ.</td><td>12490</td><td>1609</td></tr>
<tr><td>ಒಟ್ಟಾರೆ</td><td>75310</td><td>7062</td></tr>
</table>
<br>ಪ್ರಸಕ್ತ ಸಾಲಿನಲ್ಲಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಖಾಲಿ ಇರುವ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ:<br><br>ಕ.ರಾ.ರ.ಸಾ.ನಿಗಮ:-<br><br>ನಿಗಮದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆ ಹಾಗೂ 300 ತಾಂತ್ರಿಕ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.</td></tr>
</table>

| | | |
|---|---|---|
| | | ಅಲ್ಲದೇ, ನಿಗಮದಲ್ಲಿ 1239 ಹೊರಗುತ್ತಿಗೆ ಚಾಲಕರು ಕಾರ್ಯನಿರ್ವಹಿಸುತ್ತಿರುತ್ತಾರೆ.<br><br>**ಬೆಂ.ಮ.ಸಾ.ಸಂಸ್ಥೆ:-**<br><br>ಸಂಸ್ಥೆಯಲ್ಲಿ 2023-24ನೇ ಸಾಲಿನ ಕಾರ್ಯಯೋಜನೆಯನ್ವಯ ಪ್ರಸ್ತುತ 2500 ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಜಾಹೀರಾತು ಹೊರಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.<br><br>**ವಾ.ಕ.ರ.ಸಾ.ಸಂಸ್ಥೆ:**<br><br>ಸಂಸ್ಥೆಯಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ.<br><br>**ಕ.ಕ.ರ.ಸಾ.ನಿಗಮ:-**<br><br>ನಿಗಮದಲ್ಲಿ 925-ಚಾಲಕ ಹುದ್ದೆ ಮತ್ತು 694-ಚಾಲಕ-ಕಂ-ನಿರ್ವಾಹಕ ಹುದ್ದೆಗಳ ಸೇರಿದಂತೆ 16-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದ್ದು, ಜನವರಿ 2024ರ ಒಳಗಾಗಿ ನೇಮಕಾತಿ ಪ್ರಕ್ರಿಯೆಗಳನ್ನು ಮುಕ್ತಾಯಗೊಳಿಸಿ, ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಕ್ರಮ ವಹಿಸಲಾಗುವುದು.<br><br>15-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಮುಂದುವರೆದು, ಬಾಕಿ ಇದ್ದ 36 ಹಿಂಬಾಕಿ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಇ. | ಸಿಬ್ಬಂದಿಗಳಿಗೆ ಕಳೆದ ಕೆಲವು ತಿಂಗಳುಗಳಿಂದ ವೇತನ ಮತ್ತು ಹೆಚ್ಚುವರಿ ವೇತನ ಭತ್ಯೆ (ಒ.ಟಿ) ಪಾವತಿಯಾಗಿಲ್ಲದ ಬಗ್ಗೆ | ಸಾರಿಗೆ ಸಂಸ್ಥೆಗಳಲ್ಲಿ ಸಿಬ್ಬಂದಿಗಳಿಗೆ ವೇತನ ಮತ್ತು ಹೆಚ್ಚುವರಿ ವೇತನ ಭತ್ಯೆಯನ್ನು (ಒ.ಟಿ.) ಮಾಹೆಯಾನ ಪಾವತಿಸಲಾಗುತ್ತಿದೆ. |

| | | |
|---|---|---|
| | ಅರೋಪಗಳು ಕೇಳಿಬರುತ್ತಿದ್ದು, ಇದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು; | |
| ಈ. | ಸಿಬ್ಬಂದಿಗಳ ಕೊರತೆಯಿಂದ ಚಾಲಕ ಮತ್ತು ನಿರ್ವಾಹಕರು ದಿನದಲ್ಲಿ ಹೆಚ್ಚುವರಿ ಕೆಲಸ ನಿರ್ವಹಿಸುತ್ತಿದ್ದು ಅವರ ಅರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? | ಹೆಚ್ಚುವರಿ ಕರ್ತವ್ಯ ನಿರ್ವಹಿಸುವುದರಿಂದ ನಿಗಮಗಳ ಸಿಬ್ಬಂದಿ ಅನಾರೋಗ್ಯಕ್ಕೆ ಒಳಗಾಗುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಹೆಚ್ಚುವರಿ ಕರ್ತವ್ಯ ನಿರ್ವಹಿಸುವ ಎಲ್ಲಾ ಸಿಬ್ಬಂದಿಗಳ ಆರೋಗ್ಯದ ಮೇಲೆ ಪರಿಣಾಮ ಬೀರದಂತೆ ಸೂಕ್ತ ಎಚ್ಚರಿಕೆ ವಹಿಸಲಾಗುತ್ತಿದೆ.<br><br>ನಿಗಮಗಳ ನೌಕರರ ಕಾರ್ಯಸ್ವರೂಪ, ಜೀವನ ಶೈಲಿ ಮತ್ತು ಸಿಬ್ಬಂದಿಗಳ ಕೊರತೆ ಆದ ಪಕ್ಷದಲ್ಲಿ ಕಾರ್ಯ ಒತ್ತಡದಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರದಂತೆ ಮುನ್ನೆಚ್ಚರಿಕೆ ವಹಿಸುವ ಸಲುವಾಗಿ ಪ್ರತಿಷ್ಠಿತ ಆಸ್ಪತ್ರೆಗಳ ಸಹಯೋಗದೊಂದಿಗೆ ಕಾಲಕಾಲಕ್ಕೆ ವಿಭಾಗ/ ಘಟಕಗಳಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗುತ್ತಿದೆ.<br><br>ಮುಂದುವರೆದು, ಕ.ರಾ.ರ.ಸಾ.ನಿಗಮ ಹಾಗೂ ಬೆಂ.ಮ.ಸಾ.ಸಂಸ್ಥೆಗಳಲ್ಲಿ ನೌಕರರಲ್ಲಿ ಹೃದಯಾಘಾತ/ಹೃದಯ ಸಂಬಂಧಿ ಖಾಯಿಲೆಗಳನ್ನು ತಪ್ಪಿಸಲು ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳುವ ಉದ್ದೇಶದಿಂದ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಸಹಯೋಗದೊಂದಿಗೆ ಸದರಿ ಸಂಸ್ಥೆಗಳ ಕ್ರಮವಾಗಿ 40 ವರ್ಷ ಮತ್ತು 45 ವರ್ಷ ಮೇಲ್ಪಟ್ಟ ಎಲ್ಲಾ ನೌಕರರ/ಅಧಿಕಾರಿಗಳಿಗೆ ಹೃದಯ ಸಂಬಂಧಿ ವೈದ್ಯಕೀಯ ತಪಾಸಣೆಯನ್ನು ಮಾಡಿಸಲಾಗುತ್ತಿದ್ದು, ಸದರಿ ವೆಚ್ಚವನ್ನು ಆಯಾಯ ಸಂಸ್ಥೆಗಳು ಭರಿಸುತ್ತಿವೆ. |

ಸಂಖ್ಯೆ: ಟಿಡಿ 185 ಟಿಸಿಕ್ಯೂ 2023

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ
ಸಚಿವರು